510 ಶ್ರೀ ಸುನೀಲ್ ವಿ. ಹೆಗಡೆ (ಹಳಿಯಾಳ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಳಿಯಾಳ ಹಾಗೂ ಜೋಯಿಡಾ ತಾಲ್ಲೂಕುಗಳ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಆಂಬ್ಯುಲೆನ್ಸ್ ಹಾಗೂ ತಾಂತ್ರಿಕ ಸಲಕರಣೆಗಳು, ಸುಸಜ್ಜಿತವಾದ ಕಟ್ಟಡಗಳು ಮತ್ತು ಔಷಧೋಪಕರಣಗಳ ಕೊರತೆ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವುಗಳನ್ನು ಪೂರೈಸಲು ಸರಕಾರ ಕೈಗೊಂಡ ಕ್ರಮಗಳೇನು;

ಆ) ಜೋಯಿಡಾ ತಾಲ್ಲೂಕಿಗೆ ಗ್ರಾಮ ಪಂಚಾಯ್ತಿ ಮಟ್ಟದಲ್ಲಿ ಪ್ರಾಥಮಿಕ ಕೇಂದ್ರ ಅಥವಾ ಆರೋಗ್ಯ ಕವಚದಂತಹ ಸಂಚಾರಿ ಆಸ್ಪತ್ರೆಯನ್ನು ಪ್ರಾರಂಭಿಸುವ ಪ್ರಸ್ತಾವನೆ ಸರಕಾರದ ಮುಂದಿದೆಯೇ; ಹಾಗಿದ್ದಲ್ಲಿ ಎಂದಿನಿಂದ, ಪ್ರಾರಂಭಿಸಲಾಗುವುದು; ವಿವರಗಳನ್ನು ನೀಡುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ. ಹಳಿಯಾಳ ಹಾಗೂ ಜೋಯಿಡಾ ತಾಲ್ಲೂಕುಗಳ ಸಾರ್ವಜನಿಕ ಆಸ್ಪತ್ರೆಗಳಿಗೆ ಆರೋಗ್ಯ ಕವಚದಡಿ ಆಂಬ್ಯುಲೆನ್ಸ್ ಸೇವೆಯನ್ನು ಒದಗಿಸಲಾಗಿದೆ.

ಹಳಿಯಾಳ ಹಾಗೂ ಜೋಯಿಡಾ ತಾಲ್ಲೂಕುಗಳ ಸಾರ್ವಜನಿಕ ಆಸ್ಪತ್ರೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಈಗಾಗಲೇ ಕ್ಷ-ಕಿರಣ ಯಂತ್ರ, ಆಟೋಕ್ಲೇವ್, ಸ್ಟೆರಿಲೈಜರ್ಸ್, ಜನರೇಟರ್ ಹಾಗೂ ಇತರೇ ಅವಶ್ಯಕ ಯಂತ್ರೋಪಕರಣಗಳನ್ನು ಅಗತ್ಯಕ್ಕನುಗುಣವಾಗಿ ಸರಬರಾಜು ಮಾಡಲಾಗಿದೆ.

ಹಳಿಯಾಳ ಮತ್ತು ಜೋಯಿಡಾ ತಾಲ್ಲೂಕು ಆಸ್ಪತ್ರೆಗಳ ಕಟ್ಟಡಗಳನ್ನು ಕೆ.ಹೆಚ್.ಎಸ್.ಡಿ.ಆರ್.ಪಿ/ಎನ್.ಆರ್.ಹೆಚ್.ಎಂ. ವತಿಯಿಂದ ಸುಸಜ್ಜಿತಗೊಳಿಸಲಾಗಿದೆ.

ಅಗತ್ಯ ಉಪಕರಣಗಳನ್ನು ಖರೀದಿಸಲು ಜೋಯಿಡಾ ಆಸ್ಪತ್ರೆಗೆ ರೂ.15.00 ಲಕ್ಷ ಅನುದಾನ ಬಿಡುಗಡೆ ಮಾಡಲಾಗಿದೆ.

ಆ) ಜೋಯಿಡಾ ತಾಲ್ಲೂಕಿನಲ್ಲಿ ಒಂದು ಸಂಚಾರಿ ಆರೋಗ್ಯ ಘಟಕ ಕಾರ್ಯ ನಿರ್ವಹಿಸುತ್ತಿದೆ.

ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ತಾಲ್ಲೂಕಿನ ಜನಸಂಖ್ಯೆ ಆಧಾರದ ಮೇಲೆ ಮಂಜೂರು ಮಾಡುವ ಕಾರಣ, ಗ್ರಾಮಪಂಚಾಯಿತಿ ಆಧಾರದ ಮೇಲೆ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರು ಮಾಡಲು ಅವಕಾಶವಿರುವುದಿಲ್ಲ.

ಆರೋಗ್ಯ ಕವಚ ಯೋಜನೆಯಡಿ ಪ್ರತೀ 1.10 ಲಕ್ಷ ಜನಸಂಖ್ಯೆಗೆ ಒಂದು ಆಂಬ್ಯುಲೆನ್ಸ್ ಸೇವೆ ನೀಡುತ್ತಿರುವ ಕಾರಣ, ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಈ ಯೋಜನೆಯಡಿ ಆಂಬ್ಯುಲೆನ್ಸ್ ನೀಡಲು ಅವಕಾಶವಿರುವುದಿಲ್ಲ.

553 ಶ್ರೀ ಸುಭಾಶ್ ಆರ್. ಗುತ್ತೇದಾರ್ (ಆಳಂದ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆಯ ಆಳಂದ ತಾಲ್ಲೂಕಿನ ಆಳಂದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಘಟಕಗಳಿಗೆ ಸರ್ಕಾರದಿಂದ ಯಾವ ಯಾವ ಔಷಧಿಗಳನ್ನು ಸರಬರಾಜು ಮಾಡಲಾಗುತ್ತಿದೆ; ಔಷಧಿಗಳ ವಿವರಗಳನ್ನು ನೀಡುವುದು;

ಆ) ಈ ಔಷಧಿಗಳನ್ನು ಮೇಲ್ಕಂಡ ಆಸ್ಪತ್ರೆಗಳಿಗೆ ಸರಬರಾಜು ಮಾಡುವುದು ವಾರ್ಷಿಕವೋ ಅಥವಾ ಮಾಸಿಕವೋ;

ಇ) ಸರ್ಕಾರ ನೀಡುವ ಔಷಧಿಗಳು ಸಂಪೂರ್ಣ ಗುಣಮಟ್ಟದ್ದಾಗಿರುತ್ತವೆಯೇ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಗುಲ್ಬರ್ಗಾ ಜಿಲ್ಲೆಯ ಆಳಂದ ತಾಲ್ಲೂಕಿನ ಆಳಂದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಘಟಕಗಳಿಗೆ ದರಗುತ್ತಿಗೆಯಲ್ಲಿ ನಿಗದಿಗೊಳಿಸಲಾಗಿರುವ ಔಷಧಿಗಳು ಹಾಗೂ ಕರ್ನಾಟಕ ಸರ್ಕಾರಿ ಸ್ವಾಮ್ಯದ ಕೆ.ಎ.ಪಿ.ಎಲ್. ಸಂಸ್ಥೆಯಿಂದ ಸೇರಿ ಒಟ್ಟು 141 ಔಷಧಿಗಳನ್ನು ಆಯಾ